# ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ: ಕೇಂದ್ರ ಕಛೇರಿ: ಬೆಂಗಳೂರು

## ಪತ್ರಿಕಾ ಪ್ರಕಟಣೆ

ವಿಷಯ: ದರ್ಜೆ-3 ಮೇಲ್ವಿಚಾರಕೇತರ ಮತ್ತು ದರ್ಜೆ-4 ನೌಕರರ ಕೋರಿಕೆಯಂತೆ ಒಟ್ಟು 1308 ನೌಕರರಿಗೆ ಅಂತರ ನಿಗಮ ವರ್ಗಾವಣೆ ಸೌಲಭ್ಯ ಕಲ್ಪಿಸಲಾಗಿದೆ.

ದರ್ಜೆ-3 ಮೇಲ್ವಿಚಾರಕೇತರ ಮತ್ತು ದರ್ಜೆ-4 ನೌಕರರ 2023ನೇ ಸಾಲಿನ ಅಂತರ ನಿಗಮ ವರ್ಗಾವಣೆ ಪ್ರಕ್ರಿಯೆ ದಿನಾಂಕ: 05-07-2023 ರ ಬೆಳಿಗ್ಗೆ 11:00 ಗಂಟೆಯಿಂದ ಪ್ರಾರಂಭವಾಗಿದ್ದು, ದಿನಾಂಕ:31-12-2023 ರ ಸಂಜೆ 5:30 ರವರೆಗೆ ಆನ್-ಲೈನ್ ಮೂಲಕ www.ksrtc.org/transfer ರಲ್ಲಿ ವರ್ಗಾವಣೆಗೆ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿರುತ್ತದೆ.

ಸದರಿ ಅಂತರ ನಿಗಮ ವರ್ಗಾವಣೆಯಲ್ಲಿ ಈ ಕೆಳಗಿನಂತೆ ಮೀಸಲಾತಿ ಸೌಲಭ್ಯ ಕಲ್ಪಿಸಲಾಗಿದೆ.

- ಇದೇ ಪ್ರಥಮ ಬಾರಿಗೆ ಶೇ.40ಕ್ಕಿಂತ ಹೆಚ್ಚಿನ ಅಂಗವಿಕಲತೆ ಹೊಂದಿರುವ ನೌಕರರು ಹಾಗೂ ತೀವ್ರ ತರಹದ ಅನಾರೋಗ್ಯ (ಹೃದಯ ರೋಗ, ಕ್ಯಾನ್ಸರ್, ಸ್ಪೈನಲ್ ಕಾರ್ಡ್, ಕಿಡ್ನಿ ವೈಪಲ್ಯ ಹಾಗೂ ಮೆದಳು ಸಂಬಂಧಿಸಿದ ಖಾಯಿಲೆಗಳು) ನೌಕರರ ಪ್ರಕರಣಗಳಿಗೆ ಅಂತರ ನಿಗಮ ವರ್ಗಾವಣೆಯ ಶೇ 5 ರಷ್ಟು ಹುದ್ದೆಗಳನ್ನು ಮೀಸಲಿರಿಸಲಾಗಿದೆ.
- ಹಾಗೂ ನೌಕರರ ಪತಿ ಅಥವಾ ಪತ್ನಿಯು ಕೇಂದ್ರ ಸರ್ಕಾರ/ ರಾಜ್ಯ ಸರ್ಕಾರ ಅಥವಾ ಕೇಂದ್ರ ಸರ್ಕಾರ/ ರಾಜ್ಯ ಸರ್ಕಾರದ ಸ್ವಾಮ್ಯದ ಸಂಸ್ಥೆಯ ಅಧಿಕಾರಿ/ನೌಕರರಾಗಿ ಬೇರೆ ಬೇರೆ ಸ್ಥಳಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪ್ರಕರಣಗಳಿಗೆ ಅಂತರ ನಿಗಮ ವರ್ಗಾವಣೆಯ ಶೇ 5 ರಷ್ಟು ಹುದ್ದೆಗಳನ್ನು ಮೀಸಲಿರಿಸಿದ್ದು, ಒಟ್ಟು ಶೇಡಕ 10 ರಷ್ಟು ಮೀಸಲಾತಿ ಸೌಲಭ್ಯ ಕಲ್ಪಿಸಲಾಗಿದೆ.

ಅದರಂತೆ, ಅಂತರ ನಿಗಮ ವರ್ಗಾವಣೆಯ ವಿವರಗಳು ಈ ಕೆಳಗಿನಂತಿವೆ.

| ಕ್ರ.ಸಂ | ವಿವರ | ಸಂಭವನೀಯ ವರ್ಗಾವಣೆಯಾದ ನೌಕರರ ಸಂಖ್ಯೆ |
|---|---|---|
| 1 | ಅಂತರ ನಿಗಮ ಸಾಮಾನ್ಯ ವರ್ಗದಡಿ ವರ್ಗಾವಣೆಗೊಂಡ ನೌಕರರು | 1175 |
| 2 | ನೌಕರರ ಪತಿ ಅಥವಾ ಪತ್ನಿಯು ಕೇಂದ್ರ ಸರ್ಕಾರ/ ರಾಜ್ಯ ಸರ್ಕಾರ ಅಥವಾ ಕೇಂದ್ರ ಸರ್ಕಾರ/ ರಾಜ್ಯ ಸರ್ಕಾರದ ಸ್ವಾಮ್ಯದ ಸಂಸ್ಥೆಯ ಅಧಿಕಾರಿ/ನೌಕರರಾಗಿ ಬೇರೆ ಬೇರೆ ಸ್ಥಳಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪ್ರಕರಣಗಳನ್ನು ಪರಿಗಣಿಸಿ ವರ್ಗಾವಣೆಗೊಂಡಿರುವ ನೌಕರರು | 72 |
| 3 | ಶೇ.40ಕ್ಕಿಂತ ಹೆಚ್ಚಿನ ಅಂಗವಿಕಲತೆ ಹೊಂದಿರುವ ನೌಕರರು ತೀವ್ರ ತರಹದ ಅನಾರೋಗ್ಯ (ಹೃದಯ ರೋಗ, ಕ್ಯಾನ್ಸರ್, ಸ್ಪೈನಲ್ ಕಾರ್ಡ್, ಕಿಡ್ನಿ ವೈಫಲ್ಯ ಹಾಗೂ ಮೆದಳು ಸಂಬಂಧಿಸಿದ ಖಾಯಿಲೆಗಳು) ಪ್ರಕರಣದಲ್ಲಿ ನೌಕರರ ಕೋರಿಕೆ ಪರಿಗಣಿಸಿ ವರ್ಗಾವಣೆಗೊಂಡಿರುವ ನೌಕರರು | 61 |
| | ಒಟ್ಟು | 1308 |

ಮೇಲಿನಂತೆ, ದರ್ಜೆ–3 ಮೇಲ್ವಿಚಾರಕೇತರ ಮತ್ತು ದರ್ಜೆ–4 ರ **1,308 ನೌಕರರು** ಅಂತರ ನಿಗಮ ವರ್ಗಾವಣೆಗೆ ಅವರ ಕೋರಿಕೆ ಮೇರೆಗೆ ಅರ್ಹರಿರುತ್ತಾರೆ. ಸದರಿ ಸಂಭವನೀಯ ಅಂತರ ನಿಗಮ ವರ್ಗಾವಣೆ ಪಟ್ಟಿಯನ್ನು ksrtc.karnataka.gov.in ವೆಬ್‌ಸೈಟ್‌ನಲ್ಲಿ ದಿನಾಂಕ: 28.11.2024 ರಂದು ಪ್ರಕಟಿಸಲಾಗಿದೆ.

ಸದರಿ ಪಟ್ಟಿಗೆ ದಿನಾಂಕ: 28.11.2024 ರಿಂದ ದಿನಾಂಕ: 04.12.2024 ರ ಸಂಜೆ 5.30 ರವರೆಗೆ ಲಿಖಿತ ಆಕ್ಷೇಪಣೆ ಸಲ್ಲಿಸಲು ನೌಕರರಿಗೆ ಅವಕಾಶವನ್ನು ನೀಡಲಾಗಿದೆ. ನೌಕರರು ಆಕ್ಷೇಪಣೆಗಳನ್ನು ಕಡ್ಡಾಯವಾಗಿ ಸಂಬಂಧಪಟ್ಟ ವಿಭಾಗದ ಆಡಳಿತಾಧಿಕಾರಿಗಳಿಗೆ ಸಲ್ಲಿಸಿ ಸ್ವೀಕೃತಿ ಪಡೆಯತಕ್ಕದ್ದು. ನೌಕರರು ವೈಯಕ್ತಿಕವಾಗಿ ಅಥವಾ ಅಂಚೆಯ ಮೂಲಕ ಕೇಂದ್ರ ಕಛೇರಿಗೆ ಸಲ್ಲಿಸುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

ನಿರ್ದೇಶಕರು (ಸಿಬ್ಬಂದಿ : ಜಾಗೃತ)
ಕ.ರಾ.ರ.ಸಾ.ನಿಗಮ